**Akashvani : Bangalore**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**19.08.2024 / 13.10 hrs**

ಮುಖ್ಯಾಂಶಗಳು

**೧. ಮುಡಾ ನಿವೇಶನ ಹಗರಣ ; ರಾಜ್ಯಪಾಲರ ನಿರ್ಧಾರ ರದ್ದುಗೊಳಿಸುವಂತೆ ಕೋರಿ ಹೈಕೋರ್ಟ್ ಮೊರೆ ಹೊದ ಮುಖ್ಯಮಂತ್ರಿ ಸಿದ್ದರಾಮಯ್ಯ**

**೨. ಮುಖ್ಯಮಂತ್ರಿ ರಾಜೀನಾಮೆಗೆ ಒತ್ತಾಯಿಸಿ ಕರ್ನಾಟಕದಲ್ಲಿ ಎನ್‌ಡಿಎ ಮಿತ್ರ ಪಕ್ಷಗಳಿಂದ ಪ್ರತಿಭಟನೆ**

**೩. ದೇಶದ ಹಣಕಾಸು ಪರಿಸ್ಥಿತಿ ಕುರಿತು ಸಾರ್ವಜನಿಕ ವಲಯದ ಬ್ಯಾಂಕ್ ಮುಖ್ಯಸ್ಥರೊಂದಿಗೆ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಮಹತ್ವದ ಸಭೆ**

**೪. ನೇಪಾಳ ಪ್ರಧಾನಿಯೊಂದಿಗೆ ಇಂದು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಮಾತುಕತೆ**

**<><*<><>*><>**

ಮುಡಾ ನಿವೇಶನ ಹಗರಣದಲ್ಲಿ ತಮ್ಮ ವಿರುದ್ಧ ರಾಜ್ಯಪಾಲರು ದಾವೆ ಹೂಡಲು ನೀಡಿರುವ ಅನುಮತಿ ಪ್ರಶ್ನಿಸಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಹೈಕೋರ್ಟ್ ಮೊರೆ ಹೋಗಿದ್ದಾರೆ. ರಾಜ್ಯಪಾಲರ ನಿರ್ಧಾರವನ್ನು ರದ್ದುಪಡಿಸುವಂತೆ ಅವರು, ಹೈಕೋರ್ಟ್‌ಗೆ ರಿಟ್ ಅರ್ಜಿ ಸಲ್ಲಿಸಿದ್ದಾರೆ. ಈ ಕುರಿತಾದ ಮನವಿಯನ್ನು ತುರ್ತಾಗಿ ಕೈಗೆತ್ತಿಕೊಳ್ಳುವಂತೆ ನ್ಯಾಯಾಲಯಕ್ಕೆ ತಮ್ಮ ವಕೀಲರ ಮೂಲಕ ಮನವಿ ಸಲ್ಲಿಸಿದ್ದಾರೆ.

**<><*<><>*><>**

ಮುಡಾ ಬಿಡಿ ನಿವೇಶನಗಳ ಹಂಚಿಕೆ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹಿಸಿ ಇಂದು ಬಿಜೆಪಿ ಮತ್ತು ಜೆಡಿಎಸ್ ಒಳಗೊಂಡ ಎನ್‌ಡಿಎ ಮಿತ್ರ ಪಕ್ಷಗಳು ಪ್ರತಿಭಟನೆ ನಡೆಸುತ್ತಿವೆ. ವಿಧಾನಸೌಧ ಮತ್ತು ವಿಕಾಸಸೌಧದ ನಡುವೆ ಇರುವ ಮಹಾತ್ಮಾಗಾಂಧಿ ಪ್ರತಿಮೆ ಮುಂಭಾಗ ಉಭಯ ಪಕ್ಷಗಳ ಮುಖಂಡರು ಪ್ರತಿಭಟನೆಯಲ್ಲಿ ನಿರತರಾಗಿದ್ದಾರೆ. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್. ಅಶೋಕ, ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಜೆಡಿಎಸ್ ಮುಖಂಡ ಟಿ.ಎ. ಸರವಣ ಮತ್ತಿತರ ಮುಖಂಡರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದಾರೆ. ಬಿ.ವೈ. ವಿಜಯೇಂದ್ರ ಮಾತನಾಡಿ, ಮುಡಾ ನಿವೇಶನ ಹಗರಣದಲ್ಲಿ ಮುಖ್ಯಮಂತ್ರಿ ರಾಜೀನಾಮೆ ನೀಡುವವರೆಗೆ ಹೋರಾಟ ನಿಲ್ಲುವುದಿಲ್ಲ. ನಮ್ಮ ಹೋರಾಟ ಮತ್ತಷ್ಟು ತೀವ್ರಗೊಳ್ಳುತ್ತದೆ ಎಂದು ಎಚ್ಚರಿಕೆ ನೀಡಿದರು. ಬಿಜೆಪಿ ಮಾಜಿ ರಾಷ್ಟ್ರೀಯ ಪ್ರಧಾನಕಾರ್ಯದರ್ಶಿ ಸಿ.ಟಿ. ರವಿ ಮಾತನಾಡಿ, ಮುಖ್ಯಮಂತ್ರಿಯವರಿಗೆ ಸಂವಿಧಾನದ ಬಗ್ಗೆ ನಂಬಿಕೆ ಇದ್ದರೆ ಕೂಡಲೇ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕು ಎಂದು ಹೇಳಿದರು. ಟಿ.ಎ. ಸರವಣ ಮಾತನಾಡಿ, ಸಿದ್ದರಾಮಯ್ಯ ಅವರ ವಿರುದ್ಧ, ಎನ್‌ಡಿಎ ಮೈತ್ರಿಕೂಟ ತನ್ನ ಹೋರಾಟವನ್ನು ರಾಷ್ಟ್ರ ಮಟ್ಟಕ್ಕೆ ಕೊಂಡೊಯ್ಯಲಿದೆ ಎಂದರು. ಈ ಮಧ್ಯೆ ಆಡಳಿತಾ ರೂಢ ಕಾಂಗ್ರೆಸ್ ಕೂಡ ಪ್ರತಿಭಟನೆ ಹಮ್ಮಿಕೊಂಡಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ರಾಜ್ಯಪಾಲರ ನಡೆಯ ವಿರುದ್ಧ ಇಂದು ಕಾಂಗ್ರೆಸ್ ರಾಜ್ಯ ವ್ಯಾಪಿ ಪ್ರತಿಭಟನೆಗೆ ಕರೆ ನೀಡಿದೆ. ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಕಾಂಗ್ರೆಸ್ ಪ್ರತಿಭಟನೆ ನಡೆಸುತ್ತಿದ್ದು, ರಾಜ್ಯದ ವಿವಿಧ ಜಿಲ್ಲಾ ಕೇಂದ್ರಗಳಲ್ಲಿ ಪ್ರತಿಭಟನೆ ಹಮ್ಮಿಕೊಂಡಿದೆ.

**<><*<><>*><>**

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ನವದೆಹಲಿಯಲ್ಲಿ ಸಾರ್ವಜನಿಕ ವಲಯದ ಬ್ಯಾಂಕ್‌ಗಳ ಮುಖ್ಯಸ್ಥರೊಂದಿಗೆ ಮಹತ್ವದ ಸಭೆ ನಡೆಸುತ್ತಿದ್ದಾರೆ. ದೇಶದ ಹಣಕಾಸಿನ ಪರಿಸ್ಥಿತಿ ಕುರಿತು ಪರಾಮರ್ಶೆ ನಡೆಸಿದರು. ಸಭೆಯಲ್ಲಿ ಬ್ಯಾಂಕ್‌ಗಳ ಠೇವಣಿ ಬೆಳವಣಿಗೆ, ಕ್ರೆಡಿಟ್-ಟು-ಡಿಪಾಸಿಟ್ ಅನುಪಾತದ ಬಗ್ಗೆ ಹಾಗೂ ಪ್ರಧಾನ ಮಂತ್ರಿ ಆವಾಸ್ ಯೋಜನೆ, ಪ್ರಧಾನ ಮಂತ್ರಿ ಸೂರ್ಯ ಘರ್ ಮತ್ತು ಪಿಎಂ ವಿಶ್ವಕರ್ಮ ಯೋಜನೆಗಳಂತಹ ಸರ್ಕಾರಿ ಉಪಕ್ರಮಗಳ ಅಡಿಯಲ್ಲಿ ಸಾರ್ವಜನಿಕ ವಲಯದ ಬ್ಯಾಂಕ್‌ಗಳ ಕಾರ್ಯಕ್ಷಮತೆಯನ್ನು ಹಣಕಾಸು ಸಚಿವರು ಮೌಲ್ಯಮಾಪನ ಮಾಡಿದ್ದಾರೆ. ಮೋದಿ ೩.೦ ಸರ್ಕಾರದಲ್ಲಿ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವರಾಗಿ ಅಧಿಕಾರ ವಹಿಸಿಕೊಂಡ ನಂತರ ನಿರ್ಮಲಾ ಸೀತಾರಾಮನ್ ನಡೆಸುತ್ತಿರುವ ಬ್ಯಾಂಕ್ ಗಳ ಮೊದಲ ಪರಿಶೀಲನಾ ಸಭೆ. ಸಂಜೆ, ಹಣಕಾಸು ಸಚಿರು ಪ್ರಾದೇಶಿಕ ಗ್ರಾಮೀಣ ಬ್ಯಾಂಕ್‌ಗಳ ಕಾರ್ಯಕ್ಷಮತೆಯನ್ನು ಪರಿಶೀಲಿಸಲಿದ್ದಾರೆ. ಹಣಕಾಸು ಸೇವೆಗಳ ಇಲಾಖೆಯ ಕಾರ್ಯದರ್ಶಿ ಡಾ.ವಿವೇಕ್ ಜೋಶಿ, ಸಾರ್ವಜನಿಕ ವಲಯದ ಬ್ಯಾಂಕ್‌ಗಳ ವ್ಯವಸ್ಥಾಪಕ ನಿರ್ದೇಶಕರು ಮತ್ತು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಇತರ ಹಿರಿಯ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದಾರೆ.

**<><*<><>*><>**

ವಿಶ್ವ ಆರೋಗ್ಯ ಸಂಸ್ಥೆ ಎಂಪಾಕ್ಸ್ ಆರೋಗ್ಯ ಸಮಸ್ಯೆ ಕುರಿತು ಸಾರ್ವಜನಿಕ ಆರೋಗ್ಯ ತುರ್ತು ಪರಿಸ್ಥಿತಿ ಘೋಷಿಸಿರುವ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ, ದೆಹಲಿಯಲ್ಲಿ ನಿನ್ನೆ ಉನ್ನತಮಟ್ಟ ಸಭೆ ನಡೆಸಿ ಪರಿಸ್ಥಿತಿಯ ಪರಾಮರ್ಶೆ ನಡೆಸಿದರು.ಪ್ರಧಾನಮಂತ್ರಿ ಕಾರ್ಯಾಲಯದ ಪ್ರಧಾನ ಕಾರ್ಯದರ್ಶಿ ಡಾ. ಪಿ.ಕೆ. ಮಿಶ್ರಾ, ಮತ್ತಿತರ ಉನ್ನತ ಅಧಿಕಾರಿಗಳ ಜೊತೆ ಸಭೆ ನಡೆಸಿದ ಪ್ರಧಾನಮಂತ್ರಿಯವರು ಎಂಪಾಕ್ಸ್ ಕುರಿತಂತೆ ನಿರಂತರವಾಗಿ ನಿಗಾ ವಹಿಸಬೇಕೆಂದು ಸೂಚಿಸಿದ್ದಾರೆ. ವಿಶ್ವ ಆರೋಗ್ಯ ಸಂಸ್ಥೆ ೨ನೇ ಬಾರಿಗೆ ಈ ತಿಂಗಳ ೧೪ ರಂದು ಸಾರ್ವಜನಿಕ ಆರೋಗ್ಯ ತುರ್ತು ಪರಿಸ್ಥಿತಿ ಘೋಷಿಸಿದ್ದು, ಇದು ಅಂತಾರಾಷ್ಟ್ರೀಯ ಕಳವಳಕ್ಕೆ ಕಾರಣವಾಗಿದೆ. ೨೦೨೨ ರಿಂದ ಜಗತ್ತಿನ ೧೧೬ ರಾಷ್ಟ್ರಗಳಲ್ಲಿ ಈವರೆಗೆ ೯೯ ಸಾವಿರದ ೧೭೬ ಎಂಪಾಕ್ಸ್ ಪ್ರಕರಣಗಳು ಪತ್ತೆಯಾಗಿವೆ. ೨೦೮ ಮಂದಿ ಮೃತಪಟ್ಟಿರುವುದಾಗಿ ವರದಿಗಳು ತಿಳಿಸಿವೆ. ಕಾಂಗೋದಲ್ಲಿ ತೀವ್ರ ಪ್ರಮಾಣದಲ್ಲಿ ಈ ಆರೋಗ್ಯ ಸಮಸ್ಯೆ ಕಂಡುಬಂದಿದೆ. ಕಳೆದ ವರ್ಷಕ್ಕಿಂತ ಈ ಬಾರಿ ಜಗತ್ತಿನಲ್ಲಿ ೧೬ ಸಾವಿರದ ೬೦೦ ಪ್ರಕರಣಗಳು ಹೆಚ್ಚಾಗಿ ಕಂಡು ಬಂದಿವೆ. ಭಾರತದಲ್ಲೂ ೩೦ ಪ್ರಕರಣಗಳು ಪತ್ತೆಯಾಗಿದ್ದು, ಈ ವರ್ಷದ ಮಾರ್ಚ್‌ನಲ್ಲಿ ಕೊನೆಯ ಪ್ರಕರಣ ಕಂಡುಬಂದಿತ್ತು. ಸಭೆಯಲ್ಲಿ ಪಾಲ್ಗೊಂಡಿದ್ದ ಅಧಿಕಾರಿಗಳು ಹೊಸದಾಗಿ ಈ ಪ್ರಕರಣಗಳು ಪತ್ತೆಯಾಗಿಲ್ಲ. ಆದರೆ ಮುನ್ನೆಚ್ಚರಿಕೆ ವಹಿಸುವ ಅಗತ್ಯವಿದೆ ಎಂದು ಹೇಳಿದ್ದಾರೆ. ಪ್ರಧಾನಮಂತ್ರಿಯವರ ಪ್ರಧಾನ ಕಾರ್ಯದರ್ಶಿ ಪಿ.ಕೆ. ಮಿಶ್ರಾ ಮಾತನಾಡಿ, ಎಂಪಾಕ್ಸ್ ಸಮಸ್ಯೆ ಕಂಡುಬಂದಲ್ಲಿ ೨ ರಿಂದ ೪ ವಾರಗಳ ಕಾಲ ಪೂರಕ ವೈದ್ಯಕೀಯ ಆರೈಕೆ ಹಾಗೂ ನಿಗಾ ವ್ಯವಸ್ಥೆಯ ಮೂಲಕ ಸಮಸ್ಯೆಯನ್ನು ನಿವಾರಿಸಿಕೊಳ್ಳಬೇಕು. ದೀರ್ಘಕಾಲೀನ ಮತ್ತು ನಿಕಟ ಸಂಪರ್ಕದ ಮೂಲಕ ಈ ಆರೋಗ್ಯ ಸಮಸ್ಯೆ ಕಂಡು ಬರುತ್ತದೆ. ಇದು ಲೈಂಗಿಕ ಸಂಪರ್ಕ, ದೇಹಗಳ ನೇರ ಸಂಪರ್ಕ, ಪರಸ್ಪರ ಬಟ್ಟೆ ಬದಲಿಸಿಕೊಳ್ಳುವುದರ ಮೂಲಕ ಸೋಂಕಿತ ವ್ಯಕ್ತಿಯಿಂದ ಇದು ಹರಡುತ್ತದೆ ಎಂದು ತಿಳಿಸಿದರು.

<><*<><>*><>

ಇಂದು ದೇಶಾದ್ಯಂತ ರಕ್ಷಾ ಬಂಧನ ಆಚರಿಸಲಾಗುತ್ತಿದೆ. ಅಣ್ಣ ತಂಗಿಯರ ನಡುವಿನ ಬಾಂಧವ್ಯದ ಪ್ರತೀಕವಾಗಿರುವ ಈ ಹಬ್ಬದಲ್ಲಿ ಸಹೋದರಿಯರು ಸಹೋದರನಿಗೆ ರಕ್ಷಾ ಬಂಧನ್ ಕಟ್ಟಿ ದೀರ್ಘಾಯುಷ್ಯಕ್ಕಾಗಿ ಪ್ರಾರ್ಥಿಸಲಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್, ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಗಣ್ಯರು ದೇಶದ ಜನತೆಗೆ ರಕ್ಷಾ ಬಂಧನದ ಶುಭಾಶಯ ಕೋರಿದ್ದಾರೆ. ರಾಷ್ಟ್ರಪತಿಯವರು ತಮ್ಮ ಸಂದೇಶದಲ್ಲಿ ಇದು ಸಹೋದರ, ಸಹೋದರಿಯರ ನಡುವಿನ ಬಾಂಧವ್ಯದ ಪ್ರತೀಕವಾಗಿದ್ದು, ಪರಸ್ಪರ ಪ್ರೀತಿ, ನಂಬಿಕೆಗಳನ್ನು ಬಲಪಡಿಸುವ ಆಚರಣೆಯಾಗಿದೆ ಎಂದು ತಿಳಿಸಿದ್ದಾರೆ. ಈ ಹಬ್ಬ ಧಾರ್ಮಿಕ ಹಾಗೂ ಸಾಂಸ್ಕೃತಿಕ ಮೇರೆಗಳನ್ನು ಮೀರಿದ್ದಾಗಿದ್ದು, ದೇಶದ ವೈವಿಧ್ಯತೆ ಮತ್ತು ಏಕತೆಯ ದ್ಯೋತಕವಾಗಿದೆ. ಇದು ಮಹಿಳೆಯರ ಹಕ್ಕುಗಳನ್ನು ಸಂರಕ್ಷಿಸುವಲ್ಲಿ ನಮ್ಮ ಬದ್ಧತೆಯನ್ನು ಬಲಪಡಿಸುವ ಹಬ್ಬವಾಗಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಸಂದೇಶದಲ್ಲಿ ತಿಳಿಸಿದ್ದಾರೆ. ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ದೇಶದ ಜನತೆಗೆ ರಕ್ಷಾಬಂಧನ ಶುಭಾಶಯ ಕೋರಿದ್ದು, ಈ ಹಬ್ಬ ಸಹೋದರ, ಸಹೋದರಿಯರ ನಡುವಿನ ಪವಿತ್ರ ಬಂಧದ ಆಚರಣೆಯಾಗಿದೆ. ಈ ಸಂದರ್ಭದಲ್ಲಿ ಮಹಿಳೆಯರ ಘನತೆ ಮತ್ತು ಗೌರವವನ್ನು ಎತ್ತಿ ಹಿಡಿಯಲು ಎಲ್ಲರೂ ಬದ್ಧರಾಗಿರಬೇಕು ಎಂದು ತಿಳಿಸಿದರು. ಪ್ರಧಾನಿ ನರೇಂದ್ರ ಮೋದಿ ಎಲ್ಲಾ ನಾಗರಿಕರಿಗೆ ರಕ್ಷಾ ಬಂಧನದ ಶುಭಾಶಯ ಕೋರಿದ್ದು, ಈ ಪವಿತ್ರ ಹಬ್ಬವು ಸಂಬಂಧಗಳಲ್ಲಿ ಮಾಧುರ್ಯ, ಸಂತೋಷ, ಸಮೃದ್ಧಿ ಮತ್ತು ಜನರ ಜೀವನದಲ್ಲಿ ಅದೃಷ್ಟವನ್ನು ತರಲಿ ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಹಾರೈಸಿದ್ದಾರೆ.

<><*<><>*><>

ವಿದೇಶಾಂಗ ಸಚಿವ ಡಾ. ಎಸ್ ಜೈಶಂಕರ್ ನೇಪಾಳದ ಪ್ರಧಾನಿ ಅರ್ಜು ರಾಣಾ ದೇವುಬಾ ಅವರೊಂದಿಗೆ ಇಂದು ನವದೆಹಲಿಯಲ್ಲಿ ಮಾತುಕತೆ ನಡೆಸಲಿದ್ದಾರೆ. ಭಾರತಕ್ಕೆ ಐದು ದಿನಗಳ ಭೇಟಿಗಾಗಿ ಡಾ ದೇವುಬಾ ನಿನ್ನೆ ನವದೆಹಲಿಗೆ ಆಗಮಿಸಿದರು. ಈ ಭೇಟಿಯು ಭಾರತ ಮತ್ತು ನೇಪಾಳ ನಡುವಿನ ನಿಯಮಿತ ಉನ್ನತ ಮಟ್ಟದ ವಿನಿಮಯದ ಸಂಪ್ರದಾಯದೊಂದಿಗೆ ಹೊಂದಿಕೆಯಾಗುತ್ತದೆ ಎಂದು ವಿದೇಶಾಂಗ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ. ನೇಪಾಳ ತನ್ನ ನೆರೆ ಹೊರೆ ಮೊದಲು ಎಂಬ ನೀತಿಯಲ್ಲಿ ಭಾರತದ ಆದ್ಯತೆಯ ಪಾಲುದಾರ ರಾಷ್ಟ್ರವಾಗಿದೆ. ಈ ಭೇಟಿಯು ದ್ವಿಪಕ್ಷೀಯ ಸಹಕಾರದಲ್ಲಿನ ಪ್ರಗತಿಯನ್ನು ಚರ್ಚಿಸಲು ಮತ್ತು ಪರಿಶೀಲಿಸಲು ಎರಡೂ ಕಡೆಯವರಿಗೆ ಅವಕಾಶ ಒದಗಿಸುತ್ತದೆ ಮತ್ತು ಬಾಂಧವ್ಯವನ್ನು ಮತ್ತಷ್ಟು ಮುಂದುವರಿಸಲು ಸಹಾಯ ಮಾಡುತ್ತದೆ ಎಂದು ಹೇಳಿದೆ.

<><*<><>*><>

ಇಂದು ದೇಶಾದ್ಯಂತ ರಕ್ಷಾ ಬಂಧನ ಆಚರಿಸಲಾಗುತ್ತಿದೆ. ಅಣ್ಣ ತಂಗಿಯರ ನಡುವಿನ ಬಾಂಧವ್ಯದ ಪ್ರತೀಕವಾಗಿರುವ ಈ ಹಬ್ಬದಲ್ಲಿ ಸಹೋದರಿಯರು ಸಹೋದರನಿಗೆ ರಕ್ಷಾ ಬಂಧನ್ ಕಟ್ಟಿ ದೀರ್ಘಾಯುಷ್ಯಕ್ಕಾಗಿ ಪ್ರಾರ್ಥಿಸಲಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್, ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಗಣ್ಯರು ದೇಶದ ಜನತೆಗೆ ರಕ್ಷಾ ಬಂಧನದ ಶುಭಾಶಯ ಕೋರಿದ್ದಾರೆ. ರಾಷ್ಟ್ರಪತಿಯವರು ತಮ್ಮ ಸಂದೇಶದಲ್ಲಿ ಇದು ಸಹೋದರ, ಸಹೋದರಿಯರ

ನಡುವಿನ ಬಾಂಧವ್ಯದ ಪ್ರತೀಕವಾಗಿದ್ದು, ಪರಸ್ಪರ ಪ್ರೀತಿ, ನಂಬಿಕೆಗಳನ್ನು ಬಲಪಡಿಸುವ ಆಚರಣೆಯಾಗಿದೆ ಎಂದು ತಿಳಿಸಿದ್ದಾರೆ. ಈ ಹಬ್ಬ ಧಾರ್ಮಿಕ ಹಾಗೂ ಸಾಂಸ್ಕೃತಿಕ ಮೇರೆಗಳನ್ನು ಮೀರಿದ್ದಾಗಿದ್ದು, ದೇಶದ ವೈವಿಧ್ಯತೆ ಮತ್ತು ಏಕತೆಯ ದ್ಯೋತಕವಾಗಿದೆ. ಇದು ಮಹಿಳೆಯರ ಹಕ್ಕುಗಳನ್ನು ಸಂರಕ್ಷಿಸುವಲ್ಲಿ ನಮ್ಮ ಬದ್ಧತೆಯನ್ನು ಬಲಪಡಿಸುವ ಹಬ್ಬವಾಗಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಸಂದೇಶದಲ್ಲಿ ತಿಳಿಸಿದ್ದಾರೆ. ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ದೇಶದ ಜನತೆಗೆ ರಕ್ಷಾಬಂಧನ ಶುಭಾಶಯ ಕೋರಿದ್ದು, ಈ ಹಬ್ಬ ಸಹೋದರ, ಸಹೋದರಿಯರ ನಡುವಿನ ಪವಿತ್ರ ಬಂಧದ ಆಚರಣೆಯಾಗಿದೆ. ಈ ಸಂದರ್ಭದಲ್ಲಿ ಮಹಿಳೆಯರ ಘನತೆ ಮತ್ತು ಗೌರವವನ್ನು ಎತ್ತಿ ಹಿಡಿಯಲು ಎಲ್ಲರೂ ಬದ್ಧರಾಗಿರಬೇಕು ಎಂದು ತಿಳಿಸಿದರು. ಪ್ರಧಾನಿ ನರೇಂದ್ರ ಮೋದಿ ಎಲ್ಲಾ ನಾಗರಿಕರಿಗೆ ರಕ್ಷಾ ಬಂಧನದ ಶುಭಾಶಯ ಕೋರಿದ್ದು, ಈ ಪವಿತ್ರ ಹಬ್ಬವು ಸಂಬಂಧಗಳಲ್ಲಿ ಮಾಧುರ್ಯ, ಸಂತೋಷ, ಸಮೃದ್ಧಿ ಮತ್ತು ಜನರ ಜೀವನದಲ್ಲಿ ಅದೃಷ್ಟವನ್ನು ತರಲಿ ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಹಾರೈಸಿದ್ದಾರೆ.

**<><*<><>*><>**

ಇದೇ ೨೩ ರಂದು ನಡೆಯಲಿರುವ ಮೊದಲ ರಾಷ್ಟ್ರೀಯ ಅಂತರಿಕ್ಷ ದಿನದ ಹಿನ್ನೆಲೆಯಲ್ಲಿ ಬೆಂಗಳೂರಿನ ನೆಹರು ತಾರಾಲಯದಲ್ಲಿ ಅರ್ಥಪೂರ್ಣ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಹಿರಿಯ ಬಾಹ್ಯಾಕಾಶ ವಿಜ್ಞಾನಿ ಹಾಗೂ ನೆಹರು ತಾರಾಲಯ ನಿರ್ದೇಶಕ ಡಾ. ಬಿ.ಆರ್. ಗುರುಪ್ರಸಾದ್ ತಿಳಿಸಿದ್ದಾರೆ. ಅಂತಾರಾಷ್ಟ್ರೀಯ ಅಂತರಿಕ್ಷ ದಿನದ ಹಿನ್ನೆಲೆಯಲ್ಲಿ ಬೆಂಗಳೂರು ಆಕಾಶವಾಣಿ ಸುದ್ದಿವಿಭಾಗಕ್ಕೆ ನೀಡಿದ ವಿಶೇಷ ಸಂದರ್ಶನದಲ್ಲಿ ಅವರು, ಇಡೀ ದಿನ ಚಂದ್ರಯಾನ ಯಶಸ್ಸಿಗೆ ಕಾರಣವಾದ ಹಲವು ಮಹತ್ವದ ಅಂಶಗಳ ಕುರಿತು ವಿದ್ಯಾರ್ಥಿಗಳು ಮತ್ತು ಜನಸಾಮಾನ್ಯರಲ್ಲಿ ಅರಿವು ಮೂಡಿಸಲಾಗುತ್ತಿದೆ. ಚಂದ್ರಯಾನ ಮಾದರಿಗಳನ್ನು ಪ್ರದರ್ಶಿಸುತ್ತಿದ್ದು, ಯಶಸ್ಸಿನ ಸಾಧನೆಗಳನ್ನು ಪ್ರತಿಬಿಂಬಿಸುವ ಬಿತ್ತಿ ಚಿತ್ರಗಳನ್ನು ಸಹ ಪ್ರದರ್ಶಿಸಲಾಗುತ್ತಿದೆ ಎಂದರು. ವಿಶೇಷವಾಗಿ ವಿದ್ಯಾರ್ಥಿಗಳಿಗಾಗಿ ರಸಪ್ರಶ್ನೆ ಕಾರ್ಯಕ್ರಮ, ಆಶುಭಾಷಣ ಹಾಗೂ ಪ್ರಬಂಧ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ ಎಂದು ಹೇಳಿದರು. ಆಕಾಶವಾಣಿಗೆ ಡಾ. ಬಿ.ಆರ್. ಗುರುಪ್ರಸಾದ್ ಅವರು ನೀಡಿರುವ ಸಂದರ್ಶನ ಇಂದು ರಾತ್ರಿ ಬೆಂಗಳೂರು ಆಕಾಶವಾಣಿ ಮೂಲಕ ರಾಜ್ಯದ ಎಲ್ಲಾ ಬಾನುಲಿ ಕೇಂದ್ರಗಳಲ್ಲಿ ೯.೩೦ಕ್ಕೆ ಪ್ರಸಾರವಾಗಲಿದೆ.

**<><*<><>*><>**

ಮಾಜಿ ಸೇನಾ ಮುಖ್ಯಸ್ಥ ಜನರಲ್ ಸುಂದರರಾಜನ್ ಪದ್ಮನಾಭನ್ ಅವರು ಇಂದು ಚೆನ್ನೈನ ತಮ್ಮ ನಿವಾಸದಲ್ಲಿ ನಿಧನರಾಗಿದ್ದಾರೆ. ಅವರಿಗೆ ೮೩ ವರ್ಷ ವಯಸ್ಸಾಗಿತ್ತು.  ೨೦ನೇ ಸೇನಾ ಮುಖ್ಯಸ್ಥರಾಗಿದ್ದ ಅವರು, ಅವರು ಆಗಸ್ಟ್ ೧೯೭೫ ರಿಂದ ಜುಲೈ ೧೯೭೬ ರವರೆಗೆ ಭಾರತೀಯ ಸೇನೆಯಲ್ಲಿ ಸೇವೆ ಸಲ್ಲಿಸಿದ್ದರು.

**<><*<><>*><>**

ಭಾರತೀಯ ಕರಾವಳಿ ಕಾವಲು ಪಡೆಯ ಮಹಾನಿರ್ದೇಶಕರಾಗಿದ್ದ ರಾಕೇಶ್ ಪಾಲ್ ಚೆನ್ನೈನಲ್ಲಿ ನಿನ್ನೆ ತೀವ್ರ ಹೃದಯಾಘಾತದಿಂದ ನಿಧನರಾದರು. ಅವರಿಗೆ ೫೯ ವರ್ಷ ವಯಸ್ಸಾಗಿತ್ತು.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ೨.೩೦ ಕ್ಕೆ <>*><>**